ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1.

ಸಂಖ್ಯೆ: ಎಡಿಎಂ2(1)/ಶಿ.ರಾ.ಪ್ರ /01/ 2021-22. ದಿನಾಂಕ: 05-08-2021.

-:ಜ್ಞಾಪನ:-

ವಿಷಯ:-2021-22 ನೇ ಸಾಲಿನ **"ರಾಜ್ಯ ಮಟ್ಟದ ಉತ್ತಮ ಶಿಕ್ಷಕ"** ಪ್ರಶಸ್ತಿ ಕುರಿತಾದ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಪ್ರಕ್ರಿಯೆಯನ್ನು ಸಕಾಲದಲ್ಲಿ ನಿರ್ವಹಿಸುವ ಬಗ್ಗೆ.

ಉಲ್ಲೇಖ:- ಇದೇ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ:23.07.2021.

*********

ವಿಷಯಕ್ಕೆ ಸಂಬಂಧಿಸಿದಂತೆ, 2021-22 ನೇ ಸಾಲಿನ **"ರಾಜ್ಯ ಮಟ್ಟದ ಉತ್ತಮ ಶಿಕ್ಷಕ"** ಪ್ರಶಸ್ತಿಯ ಸಂಪೂರ್ಣ ಪ್ರಕ್ರಿಯೆಯನ್ನು ಅಂದರೆ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸುವುದರಿಂದ ಮೊದಲುಗೊಂಡು ತಾಲ್ಲೂಕು, ಜಿಲ್ಲಾ ಮತ್ತು ರಾಜ್ಯ ಮಟ್ಟದ ಆಯ್ಕೆ ಸಮಿತಿಗಳ ಆಯ್ಕೆ ಪ್ರಕ್ರಿಯೆ ನಿರ್ವಹಣೆ ಮುಂತಾದವುಗಳನ್ನು ಆನ್-ಲೈನ್ ಮೂಲಕ ನಿರ್ವಹಿಸಲು ವಹಿಸಬೇಕಾಗಿರವ ಕ್ರಮಗಳ ಕುರಿತು ವಿಸ್ತೃತವಾಗಿ ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಸದರಿ ಪ್ರಕ್ರಿಯೆಯನ್ನು ಸಕಾಲದಲ್ಲಿ ಸುಸೂತ್ರವಾಗಿ ಮತ್ತು ಯಶಸ್ವಿಯಾಗಿ ನೆರವೇರಿಸಲು ಅನುವಾಗುವಂತೆ ಉಲ್ಲೇಖಿತ ಸುತ್ತೋಲೆಯಂತೆ ಆಯಾ ತಾಲ್ಲೂಕು ಮತ್ತು ಜಿಲ್ಲಾ ಆಯ್ಕೆ ಸಮಿತಿಗಳನ್ನು ಸಾಕಷ್ಟು ಮುಂಚಿತವಾಗಿ ರಚಿಸಿಕೊಳ್ಳಲು ಮತ್ತೊಮ್ಮೆ ತಿಳಿಸಿದೆ.

ತಾಲ್ಲೂಕು ಮತ್ತು ಜಿಲ್ಲಾ ಆಯ್ಕೆ ಸಮಿತಿಗಳ ಲಾಗಿನ್ ಐಡಿ ಮತ್ತು ಪಾಸ್‌ವರ್ಡ್‌ಗಳನ್ನು ಕ್ರಮವಾಗಿ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು(ಆಡಳಿತ) ರವರ ಇಲಾಖಾ ಸಂಚಾರಿ ದೂರವಾಣಿ ಸಂಖ್ಯೆಗೆ ದಿನಾಂಕ:09-08-2021 ರಂದು ಎಸ್.ಎಂ.ಎಸ್ ಮೂಲಕ ಕಳುಹಿಸಲಾಗುವುದು.

ಅವುಗಳನ್ನು ಬಳಸಿಕೊಂಡು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಿರುವಂತೆ ತಾಲ್ಲೂಕು ಮತ್ತು ಜಿಲ್ಲಾ ಆಯ್ಕೆ ಸಮಿತಿಗಳಿಗೆ **"ರಾಜ್ಯ ಮಟ್ಟದ ಉತ್ತಮ ಶಿಕ್ಷಕ"** ಪ್ರಶಸ್ತಿಗೆ ಆನ್-ಲೈನ್ ಮೂಲಕ ನಿಗದಿತ ಅವಧಿಯಲ್ಲಿ ಸ್ವೀಕೃತವಾಗಿರುವ / ಸ್ವೀಕೃತವಾಗುವ ಅರ್ಜಿ ಮತ್ತು ಅದರೊಂದಿಗೆ ಲಗತ್ತಿಸಿರುವ ಎಲ್ಲಾ ದಾಖಲೆಗಳು, ಛಾಯಾಚಿತ್ರಗಳು, ಆಡಿಯೋಗಳು ಹಾಗೂ ವಿಡಿಯೋಗಳಲ್ಲಿನ ಅಂಶಗಳ ಸತ್ಯಾಸತ್ಯತೆಯನ್ನು ಕಡ್ಡಾಯವಾಗಿ ಮೂಲ ದಾಖಲೆಗಳೊಂದಿಗೆ ತಾಳೆ ಮಾಡಿ ಮತ್ತು ಪರಿಶೀಲನಾ ತಂಡಗಳ ವರದಿಯ ಮೂಲಕ ಅವಲೋಕಿಸಿ ಖಚಿತಪಡಿಸಿಕೊಂಡು ನಂತರ ಆಯಾ ತಾಲ್ಲೂಕು / ಜಿಲ್ಲಾ ಆಯ್ಕೆ ಸಮಿತಿಗಳ ಮೌಲ್ಯಮಾಪನ ಮಾಡಿಸಿ, ಅಂಕಗಳನ್ನು ನೀಡಿ, ತಾಲ್ಲೂಕು / ಜಿಲ್ಲಾ ಮಟ್ಟದ ಸಮಿತಿಗಳ ಪ್ರಮಾಣ ಪತ್ರದೊಂದಿಗೆ ಮುಂದಿನ ಹಂತಕ್ಕೆ ಆನ್-ಲೈನ್ ಮೂಲಕ ನಿಗದಿತ ಅವಧಿಯಲ್ಲಿ ಸಲ್ಲಿಸುವುದು.

ಒಂದು ವೇಳೆ ಯಾವುದಾದರೂ ತಾಲ್ಲೂಕು ಅಥವಾ ಜಿಲ್ಲಾ ಆಯ್ಕೆ ಸಮಿತಿ ಸದರಿ ಪ್ರಕ್ರಿಯೆಯನ್ನು ನಿಗದಿತ ಅವಧಿಯಲ್ಲಿ ಯಶಸ್ವಿಯಾಗಿ ಪೂರ್ಣಗೊಳಿಸಲು ವಿಫಲವಾದಲ್ಲಿ ಅದಕ್ಕೆ ಸದರಿ ಸಮಿತಿಗಳ ಸದಸ್ಯ ಕಾರ್ಯದರ್ಶಿಗಳಾದ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು (ಆಡಳಿತ) ರವರನ್ನು ಸಂಪೂರ್ಣ ಹೊಣೆಗಾರರನ್ನಾಗಿಸಲಾಗುವುದು.

(ಆಯುಕ್ತರ ಆದೇಶಾನುಸಾರ)

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಇವರಿಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಉಪನಿರ್ದೇಶಕರು(ಅಭಿವೃದ್ಧಿ) ರವರಿಗೆ.
2. ಉಪ ನಿರ್ದೇಶಕರು / ಹಿರಿಯ ಸಹಾಯಕ ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಆಯುಕ್ತರ ಕಛೇರಿ,

ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

3. ಸಹಾಯಕ ನಿರ್ದೇಶಕರು / ಹಿರಿಯ ಸಹಾಯಕ ನಿರ್ದೇಶಕರು (ಇ–ಆಡಳಿತ / ಇ.ಇ.ಡಿ.ಎಸ್), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.

ಪ್ರತಿಯನ್ನು ಮಾಹಿತಿಗಾಗಿ,

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ವಂದನಾಪೂರ್ವಕವಾಗಿ ಕಳುಹಿಸುತ್ತಾ ಜಿಲ್ಲಾ ಆಯ್ಕೆ ಸಮಿತಿಯ ನೇತೃತ್ವ ವಹಿಸಿ ಆಯ್ಕೆ ಪ್ರಕ್ರಿಯೆಯನ್ನು ಸಕಾಲದಲ್ಲಿ ಪೂರ್ಣಗೊಳಿಸಿ ಕೊಡಲು ಮತ್ತೊಮ್ಮೆ ಕೋರಿದೆ.
2. ನಿರ್ದೇಶಕರು(ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ವಂದನಾಪೂರ್ವಕವಾಗಿ ಕಳುಹಿಸುತ್ತಾ ತಾಲ್ಲೂಕು ಆಯ್ಕೆ ಸಮಿತಿಯ ನೇತೃತ್ವ ವಹಿಸಿ ಆಯ್ಕೆ ಪ್ರಕ್ರಿಯೆಯನ್ನು ಸಕಾಲದಲ್ಲಿ ಪೂರ್ಣಗೊಳಿಸಿ ಕೊಡಲು ಮತ್ತೊಮ್ಮೆ ತಿಳಿಸಿದೆ.
4. ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಆಯುಕ್ತರ ಆದ್ಯ ಗಮನಕ್ಕೆ ತರಲು ಕೋರಲಾಗಿದೆ.
5. ಕಛೇರಿ ಪ್ರತಿ.